# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಮಂಗಳವಾರ, ದಿನಾಂಕ:15ನೇ ಫೆಬ್ರವರಿ, 2022

## (ಸಮಯ: ಬೆಳಗ್ಗೆ: 10.30 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮರಿತಿಬ್ಬೇಗೌಡ,** ಅವರು ಅನುದಾನಿತ ಶಾಲಾ ಕಾಲೇಜುಗಳಲ್ಲಿ 2006ರ ನಂತರ ನೇಮಕಗೊಂಡಿರುವ ಹಾಗೂ ಹೊಸದಾಗಿ ವೇತನಾನುದಾನಕ್ಕೆ ಒಳಪಟ್ಟಿರುವ ಬೋಧಕ/ಬೋಧಕೇತರ ಸಿಬ್ಬಂದಿಗೆ ಎನ್.ಪಿ.ಎಸ್ ಯೋಜನೆಯಿಂದ ಪ್ರಯೋಜನವಾಗದಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು

02. **ಶ್ರೀಮತಿ ವೀಣಾ ಅಚ್ಚಯ್ಯ** ಅವರು ಕೊಡಗು ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಹುಲಿ ಹಾಗೂ ಕಾಡಾನೆಗಳ ನಿರಂತರ ದಾಳಿಯಿಂದ ಜೀವಹಾನಿ, ಬೆಳೆಹಾನಿ ಹಾಗೂ ಜಾನುವಾರುಗಳ ಮೇಲಿನ ದಾಳಿಯಿಂದಾಗಿ ಜನರು ಗಂಭೀರ ಸಮಸ್ಯೆ ಎದುರಿಸುತ್ತಿರುವ ಕುರಿತು ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು

03. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ ಬೆಂಗಳೂರಿನ ನಾಗರೀಕರ ನೆಮ್ಮದಿ ಕೆಡಿಸಿರುವ ವಿಷಯದ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು

..2..

೦4. **ಶ್ರೀ ದಿನೇಶ್ ಗೂಳಿಗೌಡ** ಅವರು ಮಂಡ್ಯ ಜಿಲ್ಲೆಯ ಬಸರಾಳು ಹೋಬಳಿ ಕಾರೆಕಟ್ಟೆ ಗ್ರಾಮದ ಸಮೀಪದಲ್ಲಿರುವ ರಾಸಾಯನಿಕ ತಯಾರಿಕಾ ಕಾರ್ಖಾನೆಯಿಂದ ರೈತರಿಗೆ ಆಗಿರುವ ನಷ್ಟಕ್ಕೆ ಸರ್ಕಾರದ ವತಿಯಿಂದ ಸೂಕ್ತ ಪರಿಹಾರವನ್ನು ನೀಡುವ ವಿಷಯದ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು

## 04. ನಿಯಮ 330ರ ಮೇರೆಗೆ

೦1. **ಶ್ರೀ ಎಸ್. ರವಿ** ಅವರು ರಾಜ್ಯದಲ್ಲಿ ಮಂಜೂರಾದ ಹೊಸ ತಾಲ್ಲೂಕುಗಳಿಗೆ ಅವಶ್ಯವಿರುವ ಮೂಲಭೂತ ಸೌಕರ್ಯಗಳಿಗಾಗಿ ಅಗತ್ಯ ಅನುದಾನಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಯು.ಬಿ. ವೆಂಕಟೇಶ್** ಅವರು ರಾಜ್ಯದಲ್ಲಿ ಬಿಟ್ ಕಾಯಿನ್ ಹಗರಣ ಕುರಿತು ಆಗಿರುವ ತನಿಖಾ ಪ್ರಗತಿ ಹಾಗೂ ಅದರ ಬೆಳವಣಿಗೆಗಳ ವಿಷಯದ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ವೃತ್ತಿ ಶಿಕ್ಷಣ (ಜೆ.ಓ.ಸಿ) ಇಲಾಖೆಯಲ್ಲಿ ಕಳೆದ 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ಖಾಯಂಗೊಳಿಸಿ ನಿಶ್ಚಿತ ಪಿಂಚಣಿ ನೀಡುವುದರೊಂದಿಗೆ ಹಿಂದಿನ ಅರ್ಹತಾ ಸೇವೆಯನ್ನು ಪರಿಗಣಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಪುಟ್ಟಣ್ಣ** ಅವರು ಖಾಸಗಿ ಅನುದಾನಿತ/ ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ನವೀಕರಣ ನಿಯಮಗಳನ್ನು ಸರಳೀಕರಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

## 05. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) **“**2022ನೇ ಫೆಬ್ರವರಿ, 14ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ**”** ಎಂದು **ಶ್ರೀ ಅರುಣ ಶಹಾಪುರ** ಅವರು ಸೂಚಿಸುವುದು;

ಆ) **ಶ್ರೀಮತಿ ಭಾರತಿ ಶೆಟ್ಟಿ** ಅವರು ಅನುಮೋದಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**